# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

000109


ಸಂಖ್ಯೆ :
No.
ಬೆಂಅಪ್ರಾ/ನಯೋಸ/PRL-30/2018-19/ 536 /2020-21.

ದಿನಾಂಕ :
Date : 27/08/2020

## ಕಾರ್ಯಾದೇಶ

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಉತ್ತರಹಳ್ಳಿ ಮನವರ್ತೆಕಾವಲ್ ಗ್ರಾಮದ ಸರ್ವೆ ನಂ. 56/2(ಹಳೆ ಸರ್ವೆ ನಂ. 7/7) ರಲ್ಲಿನ 01 ಎಕರೆ 25 ಗುಂಟೆ/6576.09 ಚ.ಮೀ ವಿಸ್ತೀರ್ಣದ ಪ್ರದೇಶಕ್ಕೆ ವಸತಿ ಬಡಾವಣೆ ನಕ್ಷೆಯನ್ನು ಅನುಮೋದಿಸಲು ಮೆ: ಮಂತ್ರಿ ಪ್ರೈಮಸ್ ಲೈಫ್ಸ್ ಪೇಸಸ್ ಪ್ರೈ ಲಿ ಮತ್ತು ಶ್ರೀ. ಬಿ.ಎಸ್.ಎನ್. ಹರಿ ರವರು ಕೋರಿರುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 29.03.2019.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 117/2019, ದಿನಾಂಕ 17.01.2020 ಮತ್ತು 18.01.2020.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-30/2018-19/1693/2019-20, ದಿನಾಂಕ 18.02.2020.
4. ಕೆನರಾ ಬ್ಯಾಂಕ್ ಚಲನ್ ನಂ. 11881. ದಿನಾಂಕ 20.02.2020 ರಂದು ಪಾವತಿಸಿರುವ ಒಟ್ಟು ₹. 04,95,500/- ಗಳ ಮೊತ್ತವನ್ನು ಪ್ರಾಧಿಕಾರದ ಆರ್ಥಿಕ ಸದಸ್ಯರು ದಿನಾಂಕ 03.03.2020 ರಂದು ದೃಢೀಕರಿಸಿರುವುದು.
5. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-30/2018-19/1871/2019-20, ದಿನಾಂಕ 20.03.2020.
6. ಅಧಿಕ ಜಿಲ್ಲಾ ನೊಂದಣಾದಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಅಪ್ರಾ ರವರ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ ಪರಿತ್ಯಾಜನಾ ಪತ್ರ BDA-1-00206-2020-21, ಸಿ.ಡಿ. ನಂ. BDAD591, ದಿನಾಂಕ 05.06.2020.
7. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-30/2018-19/260/2020-21, ದಿನಾಂಕ 02.07.2020.
8. ಕೆನರಾ ಬ್ಯಾಂಕ್ ಚಲನ್ ನಂ. 916, ದಿನಾಂಕ 06.07.2020 ರಂದು ಪಾವತಿಸಿರುವ ಒಟ್ಟು ₹. 05,64,570/- ಗಳ ಮೊತ್ತವನ್ನು ಪ್ರಾಧಿಕಾರದ ಆರ್ಥಿಕ ಸದಸ್ಯರು ದಿನಾಂಕ 03.08.2020 ರಂದು ದೃಢೀಕರಿಸಿರುವುದು.

ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಉತ್ತರಹಳ್ಳಿ ಮನವರ್ತೆಕಾವಲ್ ಗ್ರಾಮದ ಸರ್ವೆ ನಂ. 56/2(ಹಳೆ ಸರ್ವೆ ನಂ. 7/7) ರಲ್ಲಿನ 01 ಎಕರೆ 25 ಗುಂಟೆ/6576.09 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಅನುಮೋದಿಸುವಂತೆ ಉಲ್ಲೇಖ [1] ರಲ್ಲಿ ಮೆ: ಮಂತ್ರಿ ಪ್ರೈಮಸ್ ಲೈಫ್ಸ್ ಪೇಸಸ್ ಪ್ರೈ ಲಿ ಮತ್ತು ಶ್ರೀ. ಬಿ.ಎಸ್.ಎನ್. ಹರಿ ರವರು ಕೋರಿರುತ್ತಾರೆ.


ಟಿ. ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು - 560 020.
T. Chowdaiah Road, Kumarapark West, Bangalore-560 020, Facsimile: 2334 5799, Website: www.bdabangalore.org

ಪ್ರಸ್ತಾವನೆಯನ್ನು ಉಲ್ಲೇಖ [2] ರಂತೆ ದಿನಾಂಕ 17.01.2020 ಮತ್ತು 18.01.2020 ರಂದು ಜರುಗಿದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 117/2019 ರಲ್ಲಿ ಮಂಡಿಸಲಾಗಿತ್ತು. ಚರ್ಚೆಯ ನಂತರ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಉತ್ತರಹಳ್ಳಿ ಮನವರ್ತೆಕಾವಲ್ ಗ್ರಾಮದ ಸರ್ವೆ ನಂ. 56/2(ಹಳೆ ಸರ್ವೆ ನಂ. 7/7) ರಲ್ಲಿನ 01 ಎಕರೆ 25 ಗುಂಟೆ/6576.09 ಚ.ಮೀ ವಿಸ್ತೀರ್ಣದ ಪ್ರದೇಶಕ್ಕೆ ವಸತಿ ಬಡಾವಣೆ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕೆ.ಟಿ.ಸಿ.ಪಿ. ಕಾಯ್ದೆ ಕಲಂ 17 [2-ಎ] ರಡಿಯಲ್ಲಿ ಅನುಮೋದಿಸಲು ಆಯುಕ್ತರಿಗೆ ಅಧಿಕಾರ ಪ್ರತ್ಯಾಯೋಜಿಸಲು ತೀರ್ಮಾನಿಸಲಾಯಿತು.

ಉಲ್ಲೇಖ [2] ರ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಬಡಾವಣೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ [3] ರ ಪತ್ರದಲ್ಲಿ ವಿವಿಧ ಶುಲ್ಕಗಳ ಬಾಬ್ತು ₹. 04,95,500/- [₹. ನಾಲ್ಕು ಲಕ್ಷದ ತೊಂಭತ್ತೈದು ಸಾವಿರದ ಐನೂರು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ತಿಳಿಸಲಾಗಿತ್ತು.

ಅರ್ಜಿದಾರರು ದಿನಾಂಕ 20.02.2020 ರಂದು ಉಲ್ಲೇಖ [4] ರಂತೆ ₹. 04,95,500/- [₹. ನಾಲ್ಕು ಲಕ್ಷದ ತೊಂಭತ್ತೈದು ಸಾವಿರದ ಐನೂರು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 11881 ರ ಮೂಲಕ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಸದರಿ ಮೊತ್ತವು ಪ್ರಾಧಿಕಾರದ ಲೆಕ್ಕ ಶೀರ್ಷಿಕೆಯಲ್ಲಿ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 03.03.2020 ರಂದು ದೃಢೀಕರಿಸಿರುತ್ತಾರೆ.

ಉಲ್ಲೇಖ [5] ರಂತೆ ತಾತ್ಕಾಲಿಕ ಕರಡು ವಸತಿ ಬಡಾವಣೆ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ, ಪಬ್ಲಿಕ್ ಯುಟಿಲಿಟಿ ಮತ್ತು ರಸ್ತೆ ಪ್ರದೇಶಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು [ದಕ್ಷಿಣ], ಬನಶಂಕರಿ ವಾಣಿಜ್ಯ ಸಂಕೀರ್ಣ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ತಿಳಿಸಲಾಗಿತ್ತು.

ಕಾರ್ಯಪಾಲಕ ಅಭಿಯಂತರರು [ದಕ್ಷಿಣ], ಬನಶಂಕರಿ ವಾಣಿಜ್ಯ ಸಂಕೀರ್ಣ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರು ಉಲ್ಲೇಖ [6] ರಂತೆ ತಾತ್ಕಾಲಿಕ ಕರಡು ವಸತಿ ಬಡಾವಣೆ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗಗಳು, ಪಬ್ಲಿಕ್ ಯುಟಿಲಿಟಿ ಮತ್ತು ರಸ್ತೆ ಪ್ರದೇಶಗಳನ್ನು ದಿನಾಂಕ 05.06.2020 ರಂದು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುತ್ತಾರೆ.

ಕರ್ನಾಟಕ ರಾಜ್ಯ ಪತ್ರ ದಿನಾಂಕ 25.02.2020 ರಂತೆ ಪ್ರಶ್ನಿತ ಪ್ರದೇಶದ ಮಾರುಕಟ್ಟೆ ಮೌಲ್ಯ ಮಾರ್ಗಸೂಚಿಯ ದರಪಟ್ಟಿಯಂತೆ ವಿವಿಧ ಶುಲ್ಕಗಳಾದ ₹. 05,64,570/- [₹. ಐದು ಲಕ್ಷದ ಅರವತ್ತನಾಲ್ಕು ಸಾವಿರದ ಐನೂರ ಎಪ್ಪತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ಅರ್ಜಿದಾರರಿಗೆ ಉಲ್ಲೇಖ [7] ರ ಪತ್ರದಲ್ಲಿ ತಿಳಿಸಲಾಗಿತ್ತು.

ಅರ್ಜಿದಾರರು ದಿನಾಂಕ 06.07.2020 ರಂದು ಉಲ್ಲೇಖ [8] ರಂತೆ ₹. 05,64,570/- [₹. ಐದು ಲಕ್ಷದ ಅರವತ್ತನಾಲ್ಕು ಸಾವಿರದ ಐನೂರ ಎಪ್ಪತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 916 ರ ಮೂಲಕ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಸದರಿ ಮೊತ್ತವು ಪ್ರಾಧಿಕಾರದ ಲೆಕ್ಕ ಶೀರ್ಷಿಕೆಯಲ್ಲಿ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 03.08.2020 ರಂದು ದೃಢೀಕರಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಉತ್ತರಹಳ್ಳಿ ಮನವರ್ತೆಕಾವಲ್ ಗ್ರಾಮದ ಸರ್ವೆ ನಂ. 56/2(ಹಳೆ ಸರ್ವೆ ನಂ. 7/7) ರಲ್ಲಿನ 01 ಎಕರೆ 25 ಗುಂಟೆ/6576.09 ಚ.ಮೀ ವಿಸ್ತೀರ್ಣದ ಪ್ರದೇಶಕ್ಕೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದಿಸಲಾಗಿದೆ.

| | |
|---|---|
| 1 | ಪ್ರಶ್ನಿತ ಪ್ರದೇಶವು 01 ಎಕರೆ 25 ಗುಂಟೆ ಇರುವುದರಿಂದ STP ಯನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು. STP ಯನ್ನು ನಿರ್ಮಿಸಿರುವ ಬಗ್ಗೆ ಖಚಿತ ಪಡಿಸಿಕೊಂಡ ನಂತರವೇ ಅಂತಿಮ ನಿವೇಶನಗಳನ್ನು ಬಿಡುಗಡೆ ಮಾಡತಕ್ಕದ್ದು. |
| 2 | ತಾತ್ಕಾಲಿಕ ಅನುಮೋದಿತ ಬಡಾವಣೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 3 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿತೋರಿಸತಕ್ಕದ್ದು. |
| 4 | ವಸತಿ ಬಡಾವಣೆ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 5 | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water table ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 6 | ಉದ್ದೇಶಿತ ಬಡಾವಣೆ ಪ್ರದೇಶದ ಸನಿಹದಲ್ಲಿ ಕೆರೆ ಇದ್ದಲ್ಲಿ ಕೆರೆಯ ಅಂಚಿನಿಂದ ಸುತ್ತಲೂ RMP-2015 ರ ವಲಯ ನಿಯಮಾವಳಿಯಂತೆ 30 ಮೀ. ಬಫರ್ ಪ್ರದೇಶವನ್ನು ಅಭಿವೃದ್ಧಿ ರಹಿತ ಪ್ರದೇಶವನ್ನಾಗಿ ಕಾಯ್ದಿರಿಸತಕ್ಕದ್ದು. ಹಾಗೂ ನಾಲಾಗಳ ಮಧ್ಯಭಾಗದಿಂದ RMP-2015 ರ ವಲಯ ನಿಯಮಾವಳಿಯಂತೆ ಬಫರ್ ಕಾಯ್ದಿರಿಸತಕ್ಕದ್ದು. |
| 7 | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |

| | |
|---|---|
| 8 | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಈಗ ನೀಡಿರುವ ಬಡಾವಣೆ ನಕ್ಷೆ ಅನುಮೋದನೆಯು ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು. |
| 9 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 10 | ಪ್ರಸ್ತಾಪಿತ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ. Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 11 | ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವುಮಾಡಿಕೊಡತಕ್ಕದ್ದು. |
| 12 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 13 | ನಿವೇಶನಗಳನ್ನು ಯಾವ ಉದ್ದೇಶಕ್ಕಾಗಿ ಕಾಯ್ದಿರಿಸಿದೆಯೋ ಆದೇ ಉದ್ದೇಶಕ್ಕೆ ಕಾಯ್ದಿರಿಸುವುದು. |
| 14 | ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧ ಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |
| 15 | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. ಸಿವಿಲ್ ಕಾಮಗಾರಿಗೆ BWSSB ಯವರಿಂದ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಖರೀದಿಸಿ ಉಪಯೋಗಿಸತಕ್ಕದ್ದು. |
| 16 | ಅಭಿವೃದ್ದಿದಾರರು ಕೊಳಚೆ ನೀರನ್ನು ಬಯಲು ಜಾಗ/ ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದು. |
| 17 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೆ ಗೃಹ ಬಳಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಒದಗಿಸತಕ್ಕದ್ದು. ಕುಡಿಯುವ ನೀರು ಮತ್ತು ಇತರೆ ಉಪಯೋಗಗಳಿಗೆ Dual Piping System ಅಳವಡಿಸುವುದು. |
| 18 | ಅಭಿವೃದ್ದಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. |

| | |
|---|---|
| 19 | BESCOM ನಿರ್ದೇಶನದಂತೆ ಬಡಾವಣೆಯಲ್ಲಿ ವಿದ್ಯುಚ್ಛಕ್ತಿ ಅಳವಡಿಸಲು ಕ್ರಮ ಕೈಗೊಳ್ಳತಕ್ಕದ್ದು. |
| 20 | ಸದರಿ ವಸತಿ ವಿನ್ಯಾಸದಲ್ಲಿ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ (EWS) ಮತ್ತು ಕಡಿಮೆ ವರ್ಗದವರಿಗಾಗಿ (LIG) ವಸತಿ ಬಡಾವಣೆ ನಕ್ಷೆಯಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ಘಟಕಗಳ ಶೇ.10 ರಷ್ಟು ವಸತಿ ನಿವೇಶನಗಳನ್ನು (EWS) ಆರ್ಥಿಕ ದುರ್ಬಲ ವರ್ಗದವರಿಗಾಗಿ ಮತ್ತು (LIG) ಕಡಿಮೆ ಆದಾಯ ವರ್ಗದವರಿಗಾಗಿ ಕಾಯ್ದಿರಿಸತಕ್ಕದ್ದು. ಆರ್ಥಿಕವಾಗಿ ಹಿಂದುಳಿದವರಿಗಾಗಿ [EWS] ಕಾಯ್ದಿರಿಸಿದ ನಿವೇಶನಗಳನ್ನು ಸಮಾಮೇಲನಗೊಳಿಸಿದಲ್ಲಿ, ಸದರಿ ಉದ್ದೇಶವೇ ವಿಫಲವಾಗುವುದರಿಂದ EWS ಗಾಗಿ ಕಾಯ್ದಿರಿಸಿರುವ ನಿವೇಶನಗಳನ್ನು ಸಮಾಮೇಲನಗೊಳಿಸಬಾರದು. |
| 21 | BWSSB, BESCOM ಇಲಾಖೆಗಳಿಂದ ಪಡೆದ NOC ಗಳನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 22 | ಬಡಾವಣೆ ನಕ್ಷೆಯಲ್ಲಿ Transformer Yard, RWH, STP, OHT ಮತ್ತು GY ಗಳಿಗಾಗಿ ಸೂಕ್ತಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು ಹಾಗೂ Transformer ಗಳನ್ನು ರಸ್ತೆಯಲ್ಲಿ ಅಳವಡಿಸದೇ, ಇದಕ್ಕಾಗಿಯೇ ಕಾಯ್ದಿರಿಸಲಾಗಿರುವ Yard ಪ್ರದೇಶದಲ್ಲಿಯೇ ನಿರ್ಮಿಸುವುದು. |
| 23 | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 24 | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಆಯುಕ್ತರು,

ಬೆಂಅಪ್ರಾ, ಬೆಂಗಳೂರು

ಇವರಿಗೆ,

ಮೆಃ ಮಂತ್ರಿ ಪ್ರೈಮಸ್ ಲೈಫ್ಸ್ ಫೇಸಸ್ ಪ್ರೈ ಲಿ.,
ಮತ್ತು
ಶ್ರೀ ಬಿ.ಎಸ್.ಎನ್. ಹರಿ,
# 36, ಕ್ರೌನ್ ಪಾಯಿಂಟ್, 2 ನೇ ಮಹಡಿ ಲ್ಯಾವೆಲ್ಲೆ ರಸ್ತೆ,
ಬೆಂಗಳೂರ 560 001